

ಅರುಣ ಪಿ. ಭಟ್ಟ

## ವಾರಭವಿಷ್ಯ 31.10.2019ರಿಂದ 6.10.2019ರವರೆಗೆ




ವಾರದ ಶುರುವಿನಲ್ಲಿ ಕೆಲವು ಸಮಸ್ಯೆ. ಕೌಟುಂಬಿಕ ವಿಷಯಗಳ ಬಗ್ಗೆ ಅಳೆದು ತೂಗಿ ವ್ಯವಹರಿಸಿ. ವಾರದ ಮಧ್ಯ ಭಾಗದಲ್ಲಿ ನಿಮ್ಮ ತಾಳ್ಮೆಯಿಂದಲೇ ಕೆಲವು ಶುಭ ವಿಚಾರಗಳು ನಡೆಯಲಿವೆ. ಆರೋಗ್ಯದಲ್ಲಿ ಚೇತರಿಕೆ.

ಶುಭದಿನ 1. ವಿಷ್ಣು ಸಹಸ್ರನಾಮ ಪಠಿಸಿರಿ.




ವಾರದ ಆರಂಭದಲ್ಲಿ ಎಂಜಿನಿಯರಿಂಗ್ ವೃತ್ತಿಯಲ್ಲಿ ಇರುವವರಿಗೆ ಬಹಳ ಉತ್ತಮ ಸಮಯ. ಅನುಭವಿ ಹಿರಿಯರಿಂದ ಅವಶ್ಯವಾದ ಜ್ಞಾನ ಸಂಪಾದನೆ ಮಾಡುತ್ತೀರಿ. ನಿಮ್ಮ ಮೇಲಿನ ಪ್ರೀತಿ ಹಾಗೂ ಕಾಳಜಿ ಹೆಚ್ಚಾಗಲಿದೆ.

ಶುಭದಿನ 4. ಹನುಮಾನ್ ಚಾಲೀಸ್ ಓದಿರಿ.




ಆಸೆ ಪೂರೈಸಿಕೊಳ್ಳಲು ಅವಕಾಶ ದೊರೆಯುತ್ತದೆ. ಈ ಅವಧಿಯಲ್ಲಿ ಸಮಸ್ಯೆಗಳ ನಿವಾರಣೆಗೆ ನಿಮಗೆ ದಾರಿ ದೊರೆಯುತ್ತದೆ. ಆರೋಗ್ಯವು ಉತ್ತಮವಾಗಿರುತ್ತದೆ. ವಾರದ ಮಧ್ಯ ಭಾಗದಲ್ಲಿ ಆದಾಯದಲ್ಲಿ ಹೆಚ್ಚಳವಾಗುತ್ತದೆ.

ಶುಭದಿನ 5. ಆಂಜನೇಯ ಉಪಾಸನೆ ಮಾಡಿರಿ.




ಸ್ಥಾನಮಾನ ಹೆಚ್ಚಿಸಿಕೊಳ್ಳುವುದಕ್ಕೆ ಹೆಚ್ಚಿನ ಶ್ರಮವನ್ನು ಹಾಕುತ್ತೀರಿ. ಬಂದ ಅವಕಾಶವನ್ನು ಸಂಪೂರ್ಣವಾಗಿ ಬಳಸಿಕೊಳ್ಳುವಿರಿ. ಕೆಮ್ಮು, ನೆಗಡಿಯಂಥ ಅನಾರೋಗ್ಯ ಸಮಸ್ಯೆಗಳು ನಿಮ್ಮನ್ನು ಕಾಡಬಹುದು.

ಶುಭದಿನ 6. ಸೌಂದರ್ಯ ಲಹರಿ ಪಠಿಸಿರಿ.




ಆರೋಪ ಹೊತ್ತುಕೊಂಡು ಬೇಸರಕ್ಕೆ ಒಳಗಾಗುತ್ತೀರಿ. ಬೇರೆ ಯಾರನ್ನೂ ನಂಬಬಾರದು ಎಂದು ತಕ್ಷಣಕ್ಕೆ ತೀರ್ಮಾನಕ್ಕೆ ಬರುವ ಸಾಧ್ಯತೆ ಇದೆ. ಈ ಅವಧಿಯಲ್ಲಿ ಧೈರ್ಯದಿಂದ ಕೆಲವು ತೀರ್ಮಾನಗಳನ್ನು ತೆಗೆದುಕೊಳ್ಳುತ್ತೀರಿ.

ಶುಭದಿನ 5. ಸಂಕಷ್ಟ ಹರ ಗಣಪತಿಗೆ ದೂರ್ವಾರ್ಚನೆ ಮಾಡಿರಿ.




ವಾರದ ಶುರುವಿನಲ್ಲಿ ಕೌಟುಂಬಿಕ ಜೀವನ ಚೆನ್ನಾಗಿರುತ್ತದೆ. ಕುಟುಂಬ ಸದಸ್ಯರ ಮೇಲೆ ನಿಮಗಿರುವ ವಿಶ್ವಾಸ ಮತ್ತಷ್ಟು ಹೆಚ್ಚಾಗುತ್ತದೆ. ಸಂಗಾತಿ ಮತ್ತು ಮಕ್ಕಳ ಜತೆಗೆ ಹೆಚ್ಚಿನ ಸಮಯ ಕಳೆಯುತ್ತೀರಿ. ಆರೋಗ್ಯವು ಉತ್ತಮವಾಗಿರುತ್ತದೆ.

ಶುಭದಿನ: 2. ಕಾಲಭೈರವನ ಸೇವೆ ಮಾಡಿರಿ.




ಪ್ರಯತ್ನದಲ್ಲಿ ನಿಮಗೆ ಯಶಸ್ಸು ಸಿಗುವುದು ಕಷ್ಟವಾಗುತ್ತದೆ. ವಾರದ ಮಧ್ಯ ಭಾಗದಲ್ಲಿ ವೈವಾಹಿಕ ಜೀವನದಲ್ಲಿ ಪ್ರಗತಿ. ವ್ಯಾಪಾರದಲ್ಲಿ ಅತ್ಯುತ್ತಮ ಅವಕಾಶಗಳು ದೊರೆಯಲಿವೆ. ಆರೋಗ್ಯ ಪರಿಸ್ಥಿತಿ ಉತ್ತಮವಾಗಿರುತ್ತದೆ.

ಶುಭದಿನ 4. ಲಿಂಗಾಷ್ಟಕ ಪಠಿಸಿರಿ.




ನಿಮ್ಮ ಆದಾಯ ಮೂಲಗಳಿಂದ ಬರುವ ಗಳಿಕೆ ಮತ್ತಷ್ಟು ಹೆಚ್ಚಾಗಲಿದೆ. ನಿಮ್ಮ ಹಣದ ಮೂಲವನ್ನು ಸರಿಯಾದ ದಾರಿಯಲ್ಲಿ ವಿತರಿಸಲು ಯಶಸ್ಸು ಸಾಧಿಸುತ್ತೀರಿ. ಅದರ ಮೂಲಕ ದೀರ್ಘಾವಧಿಯಲ್ಲಿ ದೊಡ್ಡ ಮಟ್ಟದ ಲಾಭ.

ಶುಭದಿನ 3. ಶಿವಕವಚ ಪಠಣ ಮಾಡಿರಿ.




ಮನೆಯಲ್ಲಿ ಸಂತೋಷವಾದ ವಾತಾವರಣ ಇರುತ್ತದೆ. ಈ ಅವಧಿಯಲ್ಲಿ ಉದ್ಯೋಗಸ್ಥರು ಪರಿಣಾಮಕಾರಿಯಾಗಿ ಕೆಲಸ ಕಾರ್ಯಗಳನ್ನು ಪೂರ್ಣಗೊಳಿಸುವ ನಿಟ್ಟಿನಲ್ಲಿ ಉತ್ತಮ ಸಲಹೆ ಸೂಚನೆ ನೀಡಲಿದ್ದೀರಿ. ಮನಶಾಂತಿ ಲಭಿಸಲಿದೆ.

ಶುಭದಿನ 5. ದಕ್ಷಿಣಾಮೂರ್ತಿ ಸ್ತೋತ್ರ ಪಠಿಸಿರಿ.




ವಾರದ ಆರಂಭದಲ್ಲಿ ವ್ಯಾಪಾರ ವ್ಯವಹಾರ ವಿಸ್ತರಣೆಯತ್ತ ಹೆಚ್ಚು ಗಮನ ನೀಡುತ್ತೀರಿ. ಸಣ್ಣ ಸಣ್ಣ ಬದಲಾವಣೆಗಳನ್ನು ಅಳವಡಿಸಿಕೊಳ್ಳುತ್ತಾ ದೊಡ್ಡದೊಂದು ಬದಲಾವಣೆಗೆ ಸಿದ್ಧರಾಗುತ್ತೀರಿ. ಈ ಅವಧಿಯಲ್ಲಿ ರಕ್ತದೊತ್ತಡ ಕಾಡಬಹುದು.

ಶುಭದಿನ 2. ವಿಷ್ಣು ಸಹಸ್ರನಾಮ ಓದಿರಿ.




ವಾರದ ಆರಂಭದಲ್ಲಿ ಉದ್ಯಮಿಗಳು ತಮ್ಮ ಉತ್ಪನ್ನಗಳನ್ನು ಸ್ಥಳೀಯ ಮಾರುಕಟ್ಟೆಯಲ್ಲಿ ಹೆಚ್ಚು ಪ್ರಚಾರ ಮಾಡಲು ಸಮಯ ಮೀಸಲಿಡಲಿದ್ದೀರಿ. ನಿಮ್ಮ ಶ್ರಮಕ್ಕೆ ಸಿಗುವ ಪ್ರತಿಫಲ ವೇಗವಾಗಿ ದೊರೆಯುತ್ತಿದೆ ಎಂಬ ಅಂಶ ಗಮನಕ್ಕೆ ಬರಲಿದೆ.

ಶುಭದಿನ: 4. ಚಂಡಿ ಪಾರಾಯಣ ಮಾಡಿರಿ.




ಆರೋಗ್ಯದ ಬಗ್ಗೆ ಕಾಳಜಿ ಮುಖ್ಯ. ನಿಮ್ಮ ದೈನಂದಿನ ಕಾರ್ಯ ಕಲಾಪಗಳು ಹೆಚ್ಚು ಪ್ರೋತ್ಸಾಹದಾಯಕವಾಗಿ ಇರುತ್ತವೆ. ವ್ಯಾಪಾರ ಉದ್ಯಮಕ್ಕೆ ಸಂಬಂಧಿಸಿದ ಒಡಂಬಡಿಕೆಯೊಂದನ್ನು ಅಂತಿಮಗೊಳಿಸಲಿದ್ದೀರಿ.

ಶುಭದಿನ 5. ಶ್ರೀವೆಂಕಟೇಶ್ವರ ಸ್ತೋತ್ರ ಪಠಿಸಿರಿ.

